# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 85 (104)
2. ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನ ಸಭಾ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 27.01.2026
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಗಳೂರು ವಿಮಾನ ನಿಲ್ದಾಣ ವಿಸ್ತರಣೆ ಕಾಮಗಾರಿ ಇನ್ನು ನಡೆಯದೆ ವಿದೇಶಗಳ ದೊಡ್ಡ ವಿಮಾನಗಳು ಅಂತರಾಷ್ಟ್ರೀಯ ಮಟ್ಟದ ಮಾನ್ಯತೆ ಇದ್ದರೂ ಬೇರೆ ಬೇರೆ ರಾಷ್ಟ್ರಗಳಿಗೆ ವಿಮಾನಯಾನವನ್ನು ಕೈಗೊಳ್ಳಲು ವಿಫಲವಾಗಿರುವುದಕ್ಕೆ ಕಾರಣವೇನು; (ವಿವರ ಒದಗಿಸುವುದು) | ಮಂಗಳೂರು ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು AAI ಸಂಸ್ಥೆಯ ಮೂಲಕ PPP ಆಧಾರದ ಮೇಲೆ ಖಾಸಗಿ (Adani) ಸಂಸ್ಥೆಗೆ ವಹಿಸಿರುತ್ತದೆ.<br><br>ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣವು 2,330 ಮೀಟರ್ ರನ್‌ವೇ ಉದ್ದದ Code-D ವಿಮಾನಗಳನ್ನು ನಿರ್ವಹಿಸಲು ಪರವಾನಗಿ ಪಡೆದಿದೆ. ಸದರಿ ವಿಮಾನ ನಿಲ್ದಾಣದಿಂದ ಅಬುಧಾಬಿ, ಬಹ್ರೇನ್, ದಮ್ಮಾಮ್, ದುಬೈ, ದೋಹಾ, ಕುವೈತ್ ಮತ್ತು ಜೆಡ್ಡಾ ಏಳು ಅಂತರರಾಷ್ಟ್ರೀಯ ತಾಣಗಳಿಗೆ ವಿಮಾನ ಸೇವೆಗಳು ಕಾರ್ಯನಿರ್ವಹಿಸುತ್ತಿವೆ. ಅಲ್ಲದೆ, ಬೆಂಗಳೂರು, ಚೆನ್ನೈ, ದೆಹಲಿ, ಹೈದರಾಬಾದ್, ಮುಂಬೈ, ನವಿ ಮುಂಬೈ ಮತ್ತು ತಿರುವನಂತಪುರಂ ನಗರಗಳಿಗೆ ದೇಶೀಯ ವಿಮಾನ ಸೇವೆಗಳನ್ನು ಒದಗಿಸಲಾಗಿರುತ್ತದೆ.<br><br>ಪ್ರಸ್ತುತ, ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಿವಿಧ ವಿದೇಶಿ ಗಮ್ಯಸ್ಥಾನಗಳಿಗೆ ಇರುವ ವಿಮಾನಯಾನ ಸಂಪರ್ಕವನ್ನು ಪ್ರಯಾಣಿಕರ ಬೇಡಿಕೆಯನ್ನು ಪರಿಗಣಿಸಿ ವಿಮಾನಯಾನ ಸಂಸ್ಥೆಗಳು (Airline Operators) ತಮ್ಮ ವಾಣಿಜ್ಯ ನಿರ್ಧಾರಗಳ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿವೆ. |
| (ಆ) | ಇತ್ತೀಚೆಗೆ ವಿಮಾನ ನಿಲ್ದಾಣ ವಿಸ್ತರಿಸದೆ ಮಂಗಳೂರು ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆ ರನ್‌ವೇ ಮಾಡದೇ ದೊಡ್ಡ ವಿಮಾನಗಳು ಸಂಚರಿಸಲು ತೊಂದರೆ ಉಂಟಾಗಿದೆ ಎಂಬ ವಿಷಯ ಕೇಳಿ ಬರುತ್ತಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣವು ನವೆಂಬರ್ 2022ರಲ್ಲಿ ಅಂತರಾಷ್ಟ್ರೀಯ ಮಾನದಂಡಗಳ ಅನುಸಾರ ಮೂಲಸೌಕರ್ಯವನ್ನು ಹಾಗೂ ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಗೆ CAT–I ನೈಟ್ ಲ್ಯಾಂಡಿಂಗ್ ವ್ಯವಸ್ಥೆ ಅಳವಡಿಕೆಗೆ ಸಂಬಂಧಿಸಿದಂತೆ ನಿಯಂತ್ರಣಾಧಿಕಾರಿಗಳಿಂದ ಅಗತ್ಯ ಅನುಮೋದನೆಗಳನ್ನು ಪಡೆಯಲಾಗಿದ್ದು, ಕಾರ್ಯಗಳು ಪ್ರಗತಿಯಲ್ಲಿವೆ.<br><br>ಮಂಗಳೂರು ವಿಮಾನ ನಿಲ್ದಾಣದ ರನ್ ವೇ ಬೇಸಿಕ್ ಸ್ಟ್ರಿಪ್ ಮತ್ತು RESA ವಿಸ್ತರಣೆಗಾಗಿ ಸುಮಾರು 36 ಎಕರೆ ಭೂಸ್ವಾಧೀನ ಪಡಿಸಿಕೊಳ್ಳಲು ಜಿಲ್ಲಾಡಳಿತವು ಕ್ರಮವಹಿಸುತ್ತಿದೆ.ಈ ವಿಮಾನ ನಿಲ್ದಾಣಕ್ಕೆ ಅವಶ್ಯವಿರುವ ಜಮೀನುಗಳ ಭೂಸ್ವಾಧೀನ ವೆಚ್ಚ ಮತ್ತು ಕಾಮಗಾರಿಯನ್ನು ಕೈಗೊಳ್ಳಲು AAI ಸಂಸ್ಥೆಯನ್ನು ಕೋರಲಾಗಿದೆ. |

| | | |
|---|---|---|
| (ಇ) | ಕೇಂದ್ರ ಸರ್ಕಾರ ವಿಮಾನ ನಿಲ್ದಾಣವನ್ನು ಖಾಸಗೀಕರಣಗೊಳಿಸಿರುವುದರಿಂದ ಖಾಸಗಿ ಸಂಸ್ಥೆಯವರು ವಿಮಾನ ನಿಲ್ದಾಣ ರನ್‌ವೇ ವಿಸ್ತರಿಸದೆ ಕರಾವಳಿ ಭಾಗದ ಜನರಿಗೆ ತೊಂದರೆಯನ್ನು ಉಂಟು ಮಾಡುತ್ತಿದ್ದಾರೆ ಎಂಬುದು ನಿಜವೇ; (ವಿವರ ನೀಡುವುದು) | ಇಲ್ಲ.<br>ವಿಮಾನ ನಿಲ್ದಾಣವು ಪ್ರಸ್ತುತ Code-C ವಿಮಾನಗಳ (ಏರ್‌ಬಸ್ A320 ಮತ್ತು ಬೋಯಿಂಗ್ 737 ಸರಣಿ)ಮೂಲಕ ಕಾರ್ಯನಿರ್ವಹಿಸುತ್ತಿದ್ದು, ಇದು ಪ್ರಸ್ತುತ ಪ್ರಯಾಣಿಕರ ಮುನ್ಸೂಚನೆ(forecast)ಗೆ ತಕ್ಕಂತೆ ಸಮರ್ಪಕವಾಗಿದೆ. ಆದರೆ, ಸಂಪೂರ್ಣ ವಿಮಾನ ನಿಲ್ದಾಣ ಮೂಲಸೌಕರ್ಯದ/ಮಾಸ್ಟರ್ ಪ್ಲಾನ್ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಇಲಾಖೆಯೊಂದಿಗೆ ಚರ್ಚೆಗಳನ್ನು ಪ್ರಾರಂಭಿಸಲಾಗಿದೆ. ಸದರಿ ಅಭಿವೃದ್ಧಿಗೆ ಸಂಬಂಧಿಸಿದ Traffic forecast ಅಧ್ಯಯನದ ಆಧಾರದ ಮೇಲೆ ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. |
| (ಈ) | ರಾಜ್ಯ ಸರ್ಕಾರಕ್ಕೆ ಮಂಗಳೂರು ವಿಮಾನ ನಿಲ್ದಾಣದಿಂದ ಬರುವ ಆದಾಯವೆಷ್ಟು; (ವಿವರ ನೀಡುವುದು) | ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಸ್ಥಳೀಯ ಪಂಚಾಯತ್ ಗಳಿಗೆ ತೆರಿಗೆಯ ರೂಪದಲ್ಲಿ 2024-25 ಮತ್ತು 2025-26ನೇ ಸಾಲಿನಲ್ಲಿ ಒಟ್ಟು ರೂ.1.65 ಕೋಟಿಗಳ ಆದಾಯವು ಬಂದಿರುತ್ತದೆ. |

ಸಂಖ್ಯೆ:ಮೂಅಇ12 ರಾಅವಿ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು